# ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ **ಶೀಘ್ರಲಿಪಿಗಾರರ** ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ : 27.02.2019 ಹಾಗೂ ದಿನಾಂಕ : 15.05.2019ರ ಸಂಖ್ಯೆ : ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ : 26.08.2019ರ ಸಂಖ್ಯೆ : ಕಾಶಿಇ/32/ಶೀಲಿ/ಜೇಪ/ಬಸ್ಥಾವಿ/2019-20, ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ **ಹಿರಿಯ ಬೆರಳಚ್ಚುಗಾರರ** ಅಂತಿಮ ಜ್ಯೇಷ್ಠತಾ ಪಟ್ಟಿ.
3. ದಿನಾಂಕ: 24.01.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.

*****

**ಪ್ರಸ್ತಾವನೆ:**

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ **ಶೀಘ್ರಲಿಪಿಗಾರರ** ಹುದ್ದೆಗಳಿಗೆ **ಹಿರಿಯ ಬೆರಳಚ್ಚುಗಾರರ** ಹುದ್ದೆಯಿಂದ ಶೇಕಡ 50ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2) ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದದ **ಹಿರಿಯ ಬೆರಳಚ್ಚುಗಾರರ** ಅಂತಿಮ ಜ್ಯೇಷ್ಠತಾ ಪಟ್ಟಿಯ ಆಧಾರದ ಮೇಲೆ **ಶೀಘ್ರಲಿಪಿಗಾರರ** ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 24.01.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ **ಶೀಘ್ರಲಿಪಿಗಾರರ** ಹುದ್ದೆಗಳನ್ನು ಜ್ಯೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ **ಹಿರಿಯ ಬೆರಳಚ್ಚುಗಾರರಿಂದ** ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ **ಹಿರಿಯ ಬೆರಳಚ್ಚುಗಾರರ** ವೃಂದದಿಂದ **ಶೀಘ್ರಲಿಪಿಗಾರರ** ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ **ಹಿರಿಯ ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರಾಗಿ** ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಾಶಿಇ/58/ಶೀ.ಲಿ/ಬಡ್ತಿ/2021-22 ಬೆಂಗಳೂರು, ದಿನಾಂಕ:27 .01.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ **ಹಿರಿಯ ಬೆರಳಚ್ಚುಗಾರರುಗಳಿಗೆ** ವೇತನ ಶ್ರೇಣಿ ***ರೂ. 27650-650-29600-750-32600-850-36000-950-39800-1100-46400-1250-52650* ರಲ್ಲಿ** ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ **ಶೀಘ್ರಲಿಪಿಗಾರರ** ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ, ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಖಾಲಿ ಹುದ್ದೆಗೆ ಎದುರಾಗಿ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

**ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)**

| ಕ್ರ.ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | 2 | 3 | 4 | 5 |
| 1 | ನಾಗರತ್ನ.ಎಂ | ಕೇಂದ್ರ ಕಛೇರಿ. ಬೆಂಗಳೂರು. | ಕೇಂದ್ರ ಕಛೇರಿ. ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 2 | ರಮೇಶ್.ಜೆ | ಕೇಂದ್ರ ಕಛೇರಿ. ಬೆಂಗಳೂರು. | ಕೇಂದ್ರ ಕಛೇರಿ. ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |

**ಬಡ್ತಿ ಹೊಂದಿದವರು ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಹುದ್ದೆಯ ಕರ್ತವ್ಯಕ್ಕೆ ಈ ಆದೇಶ ಪ್ರಕಟಗೊಂಡ 15 ದಿನಗಳೊಳಗಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಮಾಡಲಾಗುವುದು.**

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲ್ಲಾಖೆ**

**ಇವರಿಗೆ:**

1) ಕೇಂದ್ರ ಕಛೇರಿಯ ಎಲಾ ಅಧಿಕಾರಿಗಳಿಗೆ – ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ಹಿರಿಯ ಬೆರಳಚ್ಚುಗಾರರರಿಗೆ (ಸಂಬಂಧಪಟ್ಟ ಅಧಿಕಾರಿಗಳ ಮೂಲಕ)
3) ಮ್ಯಾನೇಜರ್/ಅಧೀಕ್ಷಕರು, ಸೇವಾ ವಿಭಾಗ/ವರ್ಗಾವಣೆ & ನಿಯೋಜನೆ ವಿಭಾಗ ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಅಧಿಕಾರಿಗಳು/ಅಧೀಕ್ಷಕರುಗಳು – ಮಾಹಿತಿಗಾಗಿ.